# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – ೪ಎ<br>Part – IVA | ಬೆಂಗಳೂರು, ಗುರುವಾರ, ೧೩, ಅಕ್ಟೋಬರ್, ೨೦೨೨(ಆಶ್ವಯುಜ, ೨೧, ಶಕವರ್ಷ, ೧೯೪೪)<br>BENGALURU, THURSDAY, 13, OCTOBER, 2022(AASHWAYUJA,21, SHAKAVARSHA, 1944) | ನಂ. ೫೧೭<br>No. 517 |
|---|---|---|


**DEPARTMENT OF PARLIAMENTARY AFFAIRS AND LEGISLATION SECRETARIAT**

**NOTIFICATION**

**NO: DPAL 15 SHASANA 2022, BENGALURU, DATED: 13.10.2022**

The Karnataka Municipalities (Amendment) Bill, 2022 ಇದಕ್ಕೆ 2022ರ ಅಕ್ಟೋಬರ್ ತಿಂಗಳ 12ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2022ರ ಕರ್ನಾಟಕ ಅಧಿನಿಯಮ ಸಂಖ್ಯೆ: 33 ಎಂಬುದಾಗಿ ಕರ್ನಾಟಕ ರಾಜ್ಯಪತ್ರದಲ್ಲಿ (ಭಾಗ IV-A) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ,-

## KARNATAKA ACT NO 33 OF 2022

(First published in the Karnataka Gazette Extra-ordinary on the 13th day of October, 2022)

## THE KARNATAKA MUNICIPALITIES (AMENDMENT) ACT, 2022

(Received the assent of the Governor on the 12th day of October, 2022)

An Act further to amend the Karnataka Municipalities Act, 1964 (Karnataka Act 22 of 1964).

Whereas it is expedient further to amend the Karnataka Municipalities Act, 1964 (Karnataka Act 22 of 1964), for the purposes herein after appearing;

Be it enacted by the Karnataka State Legislature in the seventy third year of the Republic of India as follows, namely:-

**1. Short title and commencement.-** (1) This Act may be called the Karnataka Municipalities (Amendment) Act, 2022.

(2) It shall be deemed to have come into force with effect from the 12th day of August, 2021.

**2. Amendment of section 387.-** In the Karnataka Municipalities Act, 1964 (Karnataka Act 22 of 1964), section 387 shall be omitted.

**3. Repeal and savings.-**(1) The Karnataka Municipalities (Amendment) Ordinance, 2022 (Karnataka Ordinance 03 of 2022) is hereby repealed.

(2) Notwithstanding such repeal, anything done or any action taken under the Principal Act, as amended by the said Ordinance, shall be deemed to have been done or taken under the Principal Act, as amended by this Act.

By Order and in the name of
the Governor of Karnataka,

**G. Sridhar**
Secretary to Government
Department of Parliamentary Affairs
and Legislation

**ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ**
**ಅಧಿಸೂಚನೆ**
**ಸಂಖ್ಯೆ: ಸಂವ್ಯಶಾಇ 15 ಶಾಸನ 2022, ಬೆಂಗಳೂರು, ದಿನಾಂಕ: 13.10.2022**

The Karnataka Official Language Act, 1963 (Karnataka Act 26 of 1963)ರ ಪ್ರಕರಣ 5-ಎ ರಡಿಯಲ್ಲಿ ರಾಜ್ಯಪಾಲರಿಂದ ಅಧಿಕೃತಗೊಳಿಸಿದ The Karnataka Municipalities (Amendment) Act, 2022 (Karnataka Act 33 of 2022) ನ ಭಾಷಾಂತರವನ್ನು ಅಧಿಕೃತ ಕನ್ನಡ ಪಠ್ಯವೆಂದು ಕರ್ನಾಟಕ ರಾಜ್ಯಪತ್ರದಲ್ಲಿ (ಭಾಗ IV-A) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ,-

**2022ರ ಕರ್ನಾಟಕ ಅಧಿನಿಯಮ ಸಂಖ್ಯೆ: 33**
(2022ರ ಅಕ್ಟೋಬರ್ ತಿಂಗಳ 13ನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಕರ್ನಾಟಕ ಮುನಿಸಿಪಾಲಿಟಿಗಳ (ತಿದ್ದುಪಡಿ) ಅಧಿನಿಯಮ, 2022**
(2022 ರ ಅಕ್ಟೋಬರ್ ತಿಂಗಳ 12ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)

ಕರ್ನಾಟಕ ಮುನಿಸಿಪಾಲಿಟಿಗಳ ಅಧಿನಿಯಮ 1964ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ಮುನಿಸಿಪಾಲಿಟಿಗಳ ಅಧಿನಿಯಮ 1964ನ್ನು (1964ರ ಕರ್ನಾಟಕ ಅಧಿನಿಯಮ 22) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತೂರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು, ಕರ್ನಾಟಕ ಮುನಿಸಿಪಾಲಿಟಿಗಳ (ತಿದ್ದುಪಡಿ) ಅಧಿನಿಯಮ, 2022 ಎಂದು ಕರೆಯತಕ್ಕದ್ದು.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment **WPP No. 297**



(2) ಇದು 2021ರ ಆಗಸ್ಟ್ 12ನೇ ದಿನಾಂಕದಿಂದ ಜಾರಿಗೆ ಬಂದಿರುವುದಾಗಿ ಭಾವಿಸತಕ್ಕದ್ದು.

**2. 387ನೇ ಪ್ರಕರಣದ ತಿದ್ದುಪಡಿ.-** ಕರ್ನಾಟಕ ಮುನಿಸಿಪಾಲಿಟಿಗಳ ಅಧಿನಿಯಮ, 1964 (1964ರ ಕರ್ನಾಟಕ ಅಧಿನಿಯಮ 22)ರ 387ನೇ ಪ್ರಕರಣವನ್ನು ಬಿಟ್ಟುಬಿಡತಕ್ಕದ್ದು.

**3. ನಿರಸನ ಮತ್ತು ಉಳಿಸುವಿಕೆಗಳು.-** (1) ಕರ್ನಾಟಕ ಮುನಿಸಿಪಾಲಿಟಿಗಳ (ತಿದ್ದುಪಡಿ) ಅಧ್ಯಾದೇಶ, 2022ನ್ನು (2022ರ ಕರ್ನಾಟಕ ಅಧ್ಯಾದೇಶ 03) ಈ ಮೂಲಕ ನಿರಸನಗೊಳಿಸಲಾಗಿದೆ.

(2) ಅಂಥ ನಿರಸನವು ಏನೇ ಒಳಗೊಂಡಿದ್ದರೂ ಸದರಿ ಅಧ್ಯಾದೇಶದ ಮೂಲಕ ತಿದ್ದುಪಡಿಯಾದಂತೆ ಮೂಲ ಅಧಿನಿಯಮದ ಅಡಿಯಲ್ಲಿ ಏನೇ ಮಾಡಿದ್ದರೂ ಅಥವಾ ಯಾವುದೇ ಕ್ರಮವನ್ನು ಕೈಗೊಂಡಿದ್ದರೂ ಈ ಅಧಿನಿಯಮದ ಅಡಿಯಲ್ಲಿ ತಿದ್ದುಪಡಿಯಾದಂತೆ ಮೂಲ ಅಧಿನಿಯಮದಲ್ಲಿ ಮಾಡಲಾಗಿದೆ ಅಥವಾ ಕೈಗೊಳ್ಳಲಾಗಿದೆ ಎಂದು ಭಾವಿಸತಕ್ಕದ್ದು.

The above translation of the Karnataka Municipalities (Amendment) Act, 2022 (Karnataka Act 33 of 2022) shall be authoritative text in the Kannada language under section 5-A of the Karnataka Official Language Act, 1963 (Karnataka Act 26 of 1963).

**ಥಾವರ್‌ಚಂದ್ ಗೆಹ್ಲೋಟ್**
**ಕರ್ನಾಟಕದ ರಾಜ್ಯಪಾಲರು**

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**ಜಿ. ಶ್ರೀಧರ್**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

SUNIL GARDE Digitally signed by SUNIL GARDE Date: 2022.10.13 17:29:00 +05'30'